ಇ) ಸರ್ಕಾರ ಇವರನ್ನು ಖಾಯಂಗೊಳಿಸುವ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದೇ: ಹಾಗಿದ್ದಲ್ಲಿ ಯಾವಾಗ:

ಈ) ಇದುವರೆಗೆ ಖಾಯಂ ಗೊಳಿಸದಿರಲು ಕಾರಣಗಳೇನು? ವಿವರ ಒದಗಿಸುವುದು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

ಅ) ಅಂತಹ ಹುದ್ದೆಗಳಲ್ಲಿ ಒಟ್ಟು 511 ಕಾರ್ಮಿಕರು ಕ್ರೋಡೀಕೃತ ವೇತನದ ಆಧಾರದ ಮೇಲೆ ಕೆಲಸ ಮಾಡುತ್ತಿದ್ದಾರೆ.

ಆ) 275 ನೌಕರರು 1990 ಮತ್ತು 236 ನೌಕರರು 1994 ರಿಂದ ಕೆಲಸ ಮಾಡುತ್ತಿದ್ದಾರೆ.

ಇ) ಸದ್ಯಕ್ಕೆ ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿಲ್ಲ.

ಈ) ಪ್ರಸ್ತುತ ಕಂಪನಿಯ ಆರ್ಥಿಕ ಪರಿಸ್ಥಿತಿ ಆಶಾದಾಯಕವಾಗಿಲ್ಲದ ಕಾರಣ, ಸದರಿಯವರನ್ನು ಖಾಯಂಗೊಳಿಸಿರುವುದಿಲ್ಲ. ಆದರೂ ಸಹ ಇವರ ವೇತನ ಪರಿಷ್ಕರಣೆಯ ಕುರಿತು ಸಂಘದ ಪದಾಧಿಕಾರಿಗಳ ಜೊತೆ ಚರ್ಚಿಸಲಾಗುತ್ತಿದೆ.

ಬಣಗಾರ ಜನಾಂಗವನ್ನು ಜಾತಿ ಪಟ್ಟಿಯಲ್ಲಿ ಸೇರಿಸುವುದು

4145 (4763) : ಶ್ರೀ ಆಗರ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ಹೊಸನಗರ ತಾಲ್ಲೂಕು ಮತ್ತು ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್. ಪುರ ಮತ್ತು ಕೊಪ್ಪ ತಾಲ್ಲೂಕಿನಲ್ಲಿ ಬಹಳಷ್ಟು ಸಂಖ್ಯೆಯಲ್ಲಿ ವಾಸಿಸುವ ಬಣಗಾರ ಜನಾಂಗವನ್ನು ಯಾವುದೇ ಜಾತಿ ಪಟ್ಟಿಯಲ್ಲಿ ಸೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಜನಾಂಗದವರು ಜಾತಿ ದೃಢೀಕರಣ ಪತ್ರ ಇಲ್ಲದೆ ತೊಂದರೆಗೊಳಗಾಗಿರುವುದರಿಂದ ಸರ್ಕಾರ ಕೂಡಲೇ ಸಮೀಕ್ಷೆ ನಡೆಸಿ ಜಾತಿ ಪಟ್ಟಿಗೆ ಸೇರ್ಪಡೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದೇ?

ಇ) ಈ ಕಾರ್ಯವನ್ನು ಒಂದು ಕಾಲ ಮಿತಿಯೊಳಗೆ ಸರ್ಕಾರ ಮಾಡುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಬಣಗಾರ ಜಾತಿಯು ಪ್ರಸ್ತುತ ಸರ್ಕಾರಿ ಆದೇಶದಲ್ಲಿ ಪ್ರವರ್ಗ 3(ಎ)ನಲ್ಲಿ ಬಲಿಜ ಜಾತಿಯ ಉಪಜಾತಿಯಾಗಿ ಕ್ರಮಸಂಖ್ಯೆ 3(ಐ) ನೇರಲ್ಪಟ್ಟಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿನ ಕಬ್ಬು ಬೆಳೆಗಾರರ ಸಮಸ್ಯೆಗಳು

4146 (4756) : ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಕ್ಕರೆಯ ಬೆಲೆ ಕುಸಿತದಿಂದಾಗಿ ರಾಜ್ಯದಲ್ಲಿನ ಕಬ್ಬು ಬೆಳೆಗಾರರ ಪರಿಸ್ಥಿತಿ ತೀವ್ರವಾಗಿ ಹದಗೆಟ್ಟು ರೈತರಿಗೆ ಸಮಸ್ಯೆಯಾಗಿರುವುದನ್ನು ಸರ್ಕಾರವು ಮನಗಂಡಿದೆಯೇ?

ಆ) ಹಾಗಿದ್ದಲ್ಲಿ ರೈತರನ್ನು ಸಂಕಷ್ಟದಿಂದ ಪಾರು ಮಾಡಲು ಸರ್ಕಾರ ಆಯೋಜಿಸಿರುವಂತೆಯೇ ಅನುಷ್ಠಾನಗೊಳಿಸಿರುವ ಕ್ರಮಗಳೇನು?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು)

ಅ) ಪ್ರಸ್ತುತ ವರ್ಷದಲ್ಲಿ ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆ ತೀವ್ರ ಕುಸಿದಿರುವುದರಿಂದ ಕೇಂದ್ರ ಸರ್ಕಾರದಿಂದ ಸಾಕಷ್ಟು ಪ್ರಮಾಣದಲ್ಲಿ ಮುಕ್ತ ಮಾರುಕಟ್ಟೆಗೆ ಸಕ್ಕರೆ ಬಿಡುಗಡೆಯಾಗದೆ ಇರುವುದರಿಂದ ಹಾಗೂ ಲೆವಿ ಸಕ್ಕರೆ ಬಿಡುಗಡೆಯಾಗಿದ್ದರೂ ಸಹ ಸಂಬಂಧಪಟ್ಟವರು ಎತ್ತುವಳಿ ಮಾಡದೆ ಇರುವುದರಿಂದ ಕಾರ್ಖಾನೆಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುತ್ತವೆ.

ಆ) ರೈತರನ್ನು ಸಂಕಷ್ಟದಿಂದ ಪಾರು ಮಾಡಲು ಸಕ್ಕರೆ ಮಾರಾಟ ಮಾಡಬೇಕಾದ ಪ್ರಮಾಣವನ್ನು ಪ್ರತಿ ತಿಂಗಳು ಕೇಂದ್ರ ಸರ್ಕಾರದವರು ಬಿಡುಗಡೆ ಮಾಡುವ ಪ್ರಮಾಣದ ಪ್ರಕಾರ ಮಾತ್ರ ವಿಲೇ ಮಾಡಬೇಕಾಗುತ್ತದೆ ಆದರೆ ಸಕ್ಕರೆ ಕಾರ್ಖಾನೆಗಳು ಎದುರಿಸುತ್ತಿರುವ ಹೆಬ್ಬಾವರಿ ದಾಸ್ತಾನು ಸಮಸ್ಯೆಯನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರಲಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಹಲವು ಕ್ರಮಗಳನ್ನು ತೆಗೆದುಕೊಂಡಿದ್ದು ಅವುಗಳ ವಿವರ ಈ ಕೆಳಗಿನಂತಿದೆ :-

1. ಸಕ್ಕರೆಯ ರಫ್ತಿಗೆ ಉತ್ತೇಜನ ನೀಡಲು ರಫ್ತು ಪ್ರಮಾಣದ ಮೇಲಿನ ನಿಷೇಧ ತೆಗೆದು ಹಾಕಲಾಗಿದೆ.
2. ದೇಶಾದ್ಯಂತ 20 ಲಕ್ಷ ಟನ್ ಸಕ್ಕರೆ ಕಾಮ್ ದಾಸ್ತಾನು ನಿರ್ಮಿಸಿ ಅದರ ನಿರ್ವಹಣೆ, ವಿಮಾ, ಬಡ್ಡಿ, ವೆಚ್ಚಗಳನ್ನು ಕೇಂದ್ರ ಸರ್ಕಾರವು ಭರಿಸುತ್ತಿದೆ.
3. ರಫ್ತು ಹೆಚ್ಚಿಸುವ ಉದ್ದೇಶದಿಂದ ಸಾಗಾಣಿಕೆ ವೆಚ್ಚವನ್ನು ಕೇಂದ್ರ ಸರ್ಕಾರ ಭರಿಸುತ್ತದೆ.

ಈ ಮೇಲಿನ ಕೇಂದ್ರ ಸರ್ಕಾರದ ಕ್ರಮಗಳು ಸಕ್ಕರೆ ಕಾರ್ಖಾನೆಗಳಲ್ಲಿನ ಸಕ್ಕರೆ ದಾಸ್ತಾನು ಕಡಿಮೆ ಮಾಡುವಲ್ಲಿ ಸಹಾಯಕವಾಗಬಹುದಾಗಿದೆ. ಹಾಗೂ ರೈತರ ಕಬ್ಬಿನ ಬಿಲ್ಲು ಬಾಕಿಯನ್ನು ತೀರುವಳಿ ಮಾಡಲು ಅನುಕೂಲವಾಗುತ್ತಿದೆ. ರಾಜ್ಯ ಸರ್ಕಾರವು ಕೂಡ ಕಬ್ಬು ಬೆಲೆ ಬಾಕಿ ತೀರಿಸಲು ಕೆಲವೊಂದು ಸಕ್ಕರೆ ಕಾರ್ಖಾನೆಗಳಿಗೆ ರೂ. 34.72 ಕೋಟಿ ಮೃದು ಸಾಲ ಬಿಡುಗಡೆ ಮಾಡಿದೆ.

ರಾಜ್ಯದಲ್ಲಿ ಸಂಕಷ್ಟದಲ್ಲಿರುವ ಸಕ್ಕರೆ ಉದ್ಯಮಕ್ಕೆ ಸರ್ಕಾರದ ನೆರವು

4147 (4757) : ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) ಮಾನ್ಯ ಪಶು ಸಂಗೋಪನೆ ಹಾಗು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಕ್ಕರೆ ಉದ್ಯಮ ಸಂಕಷ್ಟದಲ್ಲಿರುವುದನ್ನು ಸರ್ಕಾರ ಗಮನಿಸಿದೆಯೇ?

ಆ) ಹಾಗಿದ್ದಲ್ಲಿ ತೀವ್ರ ಸಮಸ್ಯಾತ್ಮಕ ಹಾಗೂ ಸಂಕಷ್ಟ ಪರಿಸ್ಥಿತಿಯಲ್ಲಿರುವ ಸಕ್ಕರೆ ಕಾರ್ಖಾನೆಗಳಿಗೆ ಈ ಪರಿಸ್ಥಿತಿ ಎದುರಿಸಲು ಹಾಗೂ ರೈತರಿಗೆ ನೇರವಾಗುವ ಹಿನ್ನೆಲೆಯಲ್ಲಿ ವಿಶೇಷ ರಿಯಾಯಿತಿಗಳನ್ನೇನಾದರು ನೀಡಲಾಗಿದೆಯೇ?

ಇ) ನೀಡಲಾಗಿದ್ದಲ್ಲಿ ಇದರ ವಿವರಗಳೇನು?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು)

ಅ) ಪ್ರಸ್ತುತ ಸಕ್ಕರೆ ಉದ್ಯಮ ಸಂಕಷ್ಟದಲ್ಲಿರುವುದನ್ನು ಸರ್ಕಾರ ಗಮನಿಸಿರುತ್ತದೆ.

ಆ) ಸಂಕಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳಿಗೆ ಸರ್ಕಾರವು ಕೆಲವು ರಿಯಾಯಿತಿ ಸೌಲಭ್ಯಗಳನ್ನು ನೀಡಿರುತ್ತದೆ. ಅಲ್ಲದೆ ಪ್ರಸ್ತುತ ರೋಗಗ್ರಸ್ತ ಸಹಕಾರ ಸಕ್ಕರೆ ಕಾರ್ಖಾನೆಗಳ ಪ್ರಕರಣಗಳನ್ನು ಪರಿಶೀಲಿಸಲು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ಸರ್ಕಾರವು